ಕರ್ನಾಟಕ ಸರ್ಕಾರ

# ಸಹಾಯಕ ನಿರ್ದೇಶಕರ ಕಛೇರಿ ಸಮಾಜ ಕಲ್ಯಾಣ ಇಲಾಖೆ

ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ-562110

ದೂರವಾಣಿ ಸಂಖ್ಯೆ: 080 27681784 ಇ-ಮೇಲ್: adswd.dhl@gmail.com

ಸಂಖ್ಯೆ:ಸನಿಸಕಇ(ದೇತಾ)/ಪ್ರೋ.ಧ/ಸಿಆರ್-01/2020-21 ದಿನಾಂಕ:03-09-2020

ಗೆ,

ಎಲ್ಲಾ ಪ್ರಾಂಶುಪಾಲರು,
ದೇವನಹಳ್ಳಿ ತಾಲ್ಲೂಕು
ಬೆಂಗಳೂರು ಗ್ರಾಮಾಂತರ ಜಿಲ್ಲೆ

ಮಾನ್ಯರೆ,

ವಿಷಯ :- 2019-2020ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ಜಾತಿ/ವರ್ಗದ ವಿದ್ಯಾರ್ಥಿಗಳು ಪ್ರೋತ್ಸಾಹಧನಕ್ಕಾಗಿ ಅರ್ಜಿ ಸಲ್ಲಿಸುವ ಬಗ್ಗೆ.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2019-2020 ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ಜಾತಿಯ /ವರ್ಗದ ವಿದ್ಯಾರ್ಥಿಗಳು ಇಲಾಖಾ ವೆಬ್‌ಸೈಟ್ www.sw.kar.nic.in/ www.tw.kar.nic.in ನಲ್ಲಿ ಅರ್ಜಿಯನ್ನು ಸಲ್ಲಿಸಿ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳು ಅರ್ಜಿಯನ್ನು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಮತ್ತು ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ಅರ್ಜಿಯನ್ನು ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರಿಗೆ ದೃಢೀಕೃತ ದಾಖಲಾತಿಗಳನ್ನು ಸಲ್ಲಿಸುವುದು

ಪ್ರೋತ್ಸಾಹಧನಕ್ಕಾಗಿ ಅರ್ಜಿ ಸಲ್ಲಿಸಲು ಸದರಿ ಮಾಹಿತಿಯನ್ನು ತಮ್ಮ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ/ವರ್ಗದ ವಿದ್ಯಾರ್ಥಿಗಳು ಪ್ರೋತ್ಸಾಹಧನ ಯೋಜನೆಯ ಪ್ರಯೋಜನ ಪಡೆಯಲು ಜರೂರಾಗಿ ಕ್ರಮ ಕೈಗೊಳ್ಳಲು ಕೋರಲಾಗಿದೆ.

**ಅರ್ಜಿ ಸಲ್ಲಿಸಲು ಕಡ್ಡಾಯವಾಗಿ ಅಗತ್ಯವಿರುವ ದಾಖಲೆಗಳು**

1. ಎಸ್.ಎಸ್.ಎಲ್.ಸಿ ಅಂಕಪಟ್ಟಿ ಪ್ರತಿ
2. ಜಾತಿ ಪ್ರಮಾಣ ಪತ್ರ
3. ವಿದ್ಯಾರ್ಥಿಯ ಆಧಾರ್ ಕಾರ್ಡ್ ಪ್ರತಿ
4. ಹಿಂದಿನ ತರಗತಿಯ ಅಂಕಪಟ್ಟಿಗಳು
5. ಚಾಲ್ತಿಯಲ್ಲಿರುವ ಮತ್ತು ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಖಾತೆಯ ವಿವರ
6. ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ

ತಮ್ಮ ನಂಬುಗೆಯ

ಸಹಾಯಕ ನಿರ್ದೇಶಕರು ಗ್ರೇಡ್-1
for ಸಮಾಜ ಕಲ್ಯಾಣ ಇಲಾಖೆ
ದೇವನಹಳ್ಳಿ ತಾಲ್ಲೂಕು

Scanned with CamScanner

ಕರ್ನಾಟಕ ಸರ್ಕಾರ
## ಸಹಾಯಕ ನಿರ್ದೇಶಕರ ಕಛೇರಿ ಸಮಾಜ ಕಲ್ಯಾಣ ಇಲಾಖೆ
ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ-562110
ದೂರವಾಣಿ ಸಂಖ್ಯೆ: 080 27681784 ಇ-ಮೇಲ್: adswd.dhl@gmail.com

ಸಂಖ್ಯೆ:ಸನಿಸಕಇ(ದೇತಾ)/ಪ್ರೋ.ಧ/ಸಿಆರ್-01/2020-21 ದಿನಾಂಕ:03-09-2020

# ಪ್ರಕಟಣೆ

2020ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಹಾಗೂ ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ಪ್ರಥಮ ಬಾರಿಗೆ ಪ್ರಥಮ ದರ್ಜೆಯಲ್ಲಿ ತೇರ್ಗಡೆ ಹೊಂದುವ ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಬಹುಮಾನ ಹಣ ಮಂಜೂರು ಮಾಡುವ ಬಗ್ಗೆ.

2019-20ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಯಲ್ಲಿ ಪ್ರಥಮ ಬಾರಿಗೆ ಪ್ರಥಮ ಶ್ರೇಣಿಯಲ್ಲಿ ತೇರ್ಗಡೆ ಹೊಂದಿರುವ ವಿದ್ಯಾರ್ಥಿಗಳಿಗೆ 2020-21ನೇ ಸಾಲಿನಿಂದ ಡಿ.ಬಿ.ಟಿ ಮೂಲಕ ಅನುಷ್ಠಾನ ಮಾಡಲು ಅನುಮತಿ ನೀಡಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಪ್ರೋತ್ಸಾಹಧನವನ್ನು ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗಳಿಗೆ ಜಮೆ ಮಾಡಲಾಗುವುದು ಆದ್ದರಿಂದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುವ ಅಗತ್ಯವಿರುವುದಿಲ್ಲ.

ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ಪ್ರಥಮ ಬಾರಿಗೆ ಪ್ರಥಮ ಪ್ರಯತ್ನದಲ್ಲಿ ಪ್ರಥಮ ಶ್ರೇಣಿಯಲ್ಲಿ ತೇರ್ಗಡೆ ಹೊಂದುವ ವಿದ್ಯಾರ್ಥಿಗಳಿಗೆ ಆಯಾ ಕೋರ್ಸ್‌ಗಳಿಗೆ ಅನುಗುಣವಾಗಿ ಕೆಳಕಂಡಂತೆ ಬಹುಮಾನ ಹಣ ಮಂಜೂರು ಮಾಡಲಾಗುತ್ತಿದ್ದು 2020ನೇ ಸಾಲಿನಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳು ಸಮಾಜ ಕಲ್ಯಾಣ ಇಲಾಖೆ web site: www.sw.kar.nic.in/ www.tw.kar.nic.in ನಲ್ಲಿ ಕೆಳಕಂಡ ದಾಖಲಾತಿಗಳೊಂದಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೋರಲಾಗಿದೆ. **ವಿದ್ಯಾರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 30/11/2020.**

ಬಹುಮಾನ ಹಣದ ವಿವರ

| ಕ್ರ.ಸಂ | ತರಗತಿ/ಕೋರ್ಸ್ | ಶೇಕಡವಾರು | ಬಹುಮಾನ ಹಣ |
|---|---|---|---|
| 1 | ಎಸ್.ಎಸ್.ಎಲ್.ಸಿ | ಶೇ.60% ರಿಂದ ಶೇ.74.99% | ರೂ.7,000/- |
| | | ಶೇ. 75% ರಿಂದ ಮೇಲ್ಪಟ್ಟು | ರೂ.15,000/- |
| 2 | 2ನೇ ಪಿ.ಯು.ಸಿ/ ತತ್ಸಮಾನ | ಶೇ.60% ಹಾಗೂ ಮೇಲ್ಪಟ್ಟು | ರೂ.20,000/- |
| 3 | ಅಂತಿಮ ಪದವಿ/ ತತ್ಸಮಾನ | ಶೇ.60% ಹಾಗೂ ಮೇಲ್ಪಟ್ಟು | ರೂ.25,000/- |
| 4 | ಸ್ನಾತಕೋತ್ತರ ಪದವಿ/ ತತ್ಸಮಾನ | ಶೇ.60% ಹಾಗೂ ಮೇಲ್ಪಟ್ಟು | ರೂ.30,000/- |
| 5 | ವೈದ್ಯಕೀಯ/ ಇಂಜಿನಿಯರಿಂಗ್/ ಕೃಷಿ/ ತೋಟಗಾರಿಕೆ ಪದವಿ/ ತತ್ಸಮಾನ | ಶೇ.60% ಹಾಗೂ ಮೇಲ್ಪಟ್ಟು | ರೂ.35,000/- |

**ಅರ್ಜಿ ಸಲ್ಲಿಸಲು ಬೇಕಾಗುವ ದಾಖಲಾತಿಗಳು:**

1. S.S.L.C/ 2 P.U.C/ Degree Registration Number
2. Aadhaar Number and Name as in your Aadhar Card
3. RD Number of Caste Certificate and Income Certificate
4. Applicant Photo
5. S.S.L.C/ 2 P.U.C / Degree Marks Card Scanned Copy
6. Bank Account No & IFSC Code

ಹೆಚ್ಚಿನ ಮಾಹಿತಿಗಾಗಿ
ಸಹಾಯಕ ನಿರ್ದೇಶಕರು ಗ್ರೇಡ್-1
ಸಮಾಜ ಕಲ್ಯಾಣ ಇಲಾಖೆ ದೇವನಹಳ್ಳಿ ತಾಲ್ಲೂಕು
ರವರನ್ನು ಸಂಪರ್ಕಿಸುವುದು

ಸಹಾಯಕ ನಿರ್ದೇಶಕರು ಗ್ರೇಡ್-1
ಸಮಾಜ ಕಲ್ಯಾಣ ಇಲಾಖೆ ದೇವನಹಳ್ಳಿ ತಾಲ್ಲೂಕು

Scanned with CamScanner